15

ಸಂಖ್ಯೆ: ಗ್ರಾಅಪ/03/ಗ.ಕೋಶ/2013

ಕರ್ನಾಟಕ ಸರ್ಕಾರದ ಸಚಿವಾಲಯ
– ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:19.05.2014

## ಸುತ್ತೋಲೆ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಿ ಪಾವತಿ ಮಾಡುವ ಕುರಿತು.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಮ ಸಂಖ್ಯೆ ದಿನಾಂಕ:20.09.2013
2. ಸರ್ಕಾರದ ಅರೆ ಸರ್ಕಾರಿ ಪತ್ರ ಸಮ ಸಂಖ್ಯೆ: ದಿನಾಂಕ:20.01.2014
3. ಸರ್ಕಾರದ ಪತ್ರ ಸಮ ಸಂಖ್ಯೆ: ದಿನಾಂಕ:26.03.2014
4. ಸರ್ಕಾರದ ಸುತ್ತೋಲೆ ಸಮ ಸಂಖ್ಯೆ ಮತ್ತು ಗ್ರಾಅಪ/46/ಗ್ರಾನೀಸ (2)2014, ದಿನಾಂಕ:08.04.2014

*****

ಉಲ್ಲೇಖ (1) ರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿನಾಂಕ:03.10.2013 ರಿಂದ ಕಡ್ಡಾಯಗೊಳಿಸಲಾಗಿರುತ್ತದೆ ಹಾಗೂ ಇಲಾಖೆಯಿಂದ ತೆಗೆದುಕೊಳ್ಳಲಾಗುವ ಎಲ್ಲಾ ಕಾಮಗಾರಿಗಳಿಗೆ ತಂತ್ರಾಂಶದ ಹೊರಗಡೆ ಬಿಲ್ಲುಗಳನ್ನು ಪಾವತಿ ಮಾಡುವುದನ್ನು ಸದರಿ ದಿನಾಂಕದಿಂದ ನಿಷೇಧಿಸಲಾಗಿದೆ. ಮುಂದುವರೆದು ದಿನಾಂಕ:01.04.2014ರಿಂದ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮವನ್ನೂ ಸಹ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಕಾರ್ಯಕ್ರಮದ ಬಿಲ್ಲುಗಳನ್ನು ಕಡ್ಡಾಯವಾಗಿ ಸದರಿ ತಂತ್ರಾಂಶದಿಂದ ಸೃಜಿಸಲಾಗುವ ಪಾವತಿ ಆದೇಶದ ಮೂಲಕ ಪಾವತಿ ಮಾಡಬೇಕಾಗಿರುತ್ತದೆ.

2013–14ನೇ ಸಾಲಿನ ಪ್ರಗತಿ ಪರಿಶೀಲಿಸಿದಾಗ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ದಾಖಲಾದ ಕಾಮಗಾರಿಗಳ ಬಿಲ್ಲುಗಳು ಬಹಳ ಕಡಿಮೆ ಪ್ರಮಾಣದಲ್ಲಿದ್ದು, ಈ ಬಗ್ಗೆ ಹಲವಾರು ಬಾರಿ ನಿರ್ದೇಶನ ನೀಡಿದ್ದರೂ ಕ್ರಮ ವಹಿಸದೇ ಇರುವುದು ವಿಷಾದನೀಯ. ಇದನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಗಂಭೀರವಾಗಿ ಪರಿಗಣಿಸಿರುತ್ತಾರೆ.

ಇನ್ನು ಮುಂದೆ 2014–15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಅನುಮೋದನೆಗೊಂಡ ಕ್ರಿಯಾಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದೆ. ಒಂದು ವೇಳೆ ಇದನ್ನು ನಿರ್ಲಕ್ಷಿಸಿದ್ದಲ್ಲಿ ಅಥವಾ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಪಾವತಿ ಆದೇಶವಿಲ್ಲದೆ ಪಾವತಿ ಮಾಡಿದ್ದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಈ ಮೂಲಕ ತಿಳಿಯಪಡಿಸಿದೆ.

(ಟಿ.ಎಂ.ವಿಜಯ ಬಾಸ್ಕರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL)
3. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ರೂರಲ್ ಡೆವಲಪ್‌ಮೆಂಟ್ ಏಜೆನ್ಸಿ (KRRDA)
4. ರಾಜ್ಯ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿಗಳು
5. ಮುಖ್ಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು
6. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು
7. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
9. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-09
10. ಮ್ಯಾನೇಜರ್, ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರಂ ಶಾಖೆ, ಬೆಂಗಳೂರು-03

ಪ್ರತಿ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್)/ಆಯುಕ್ತರು(ಗ್ರಾಮೀಣಾಭಿವೃದ್ಧಿ)/ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)/ನಿರ್ದೇಶಕರು (ಇ-ಆಡಳಿತ), ಇವರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.